ಹೊಸದಾಗಿ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸುವುದು

649 (921) ಶ್ರೀ ಮುನಿಯಪ್ಪ ಎಸ್ ಎಂ (ಚಿಕ್ಕಬಳ್ಳಾಪುರ) – ಸಮಾಜ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಇರುವುದು ಮತ್ತು ಪಕ್ಕದ ತಾಲ್ಲೂಕುಗಳಿಂದ ವ್ಯಾಸಂಗಕ್ಕಾಗಿ ವಿದ್ಯಾರ್ಥಿಗಳು ಚಿಕ್ಕಬಳ್ಳಾಪುರ ಕೇಂದ್ರಕ್ಕೆ ಬರುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಇಲ್ಲಿ ಪರಿಶಿಷ್ಟ ವರ್ಗ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿ ನಿಲಯಗಳು ಸಾಕಷ್ಟು ಇಲ್ಲದೇ ತೊಂದರೆಯಾಗುತ್ತಿದ್ದು ಹೊಸದಾಗಿ ವಿದ್ಯಾರ್ಥಿ ನಿಲಯಗಳನ್ನು ತೆರೆಯಲು ಸರ್ಕಾರ ಕ್ರಮಕೈಗೊಳ್ಳುವುದೇ

ಇ) ಹಾಗಿದ್ದಲ್ಲಿ ಅತ್ಯವಶ್ಯಕವಿರುವ ರೆಡ್ಡಿಗೊಲ್ಲವಾರಹಳ್ಳಿ, ದಿಬ್ಬೂರು, ಹೊಸಹುಡ್ಯ ಗ್ರಾಮಗಳಲ್ಲಿ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮವೇನು ?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) –

ಅ) ಹೌದು

ಆ) ಮತ್ತು (ಇ) ಪ್ರಸಕ್ತ ಸಾಲಿನಲ್ಲಿ ರಾಜ್ಯಾದ್ಯಾಂತ ಬಂದಿರುವ ಬೇಡಿಕೆಗಳು ಆಯವ್ಯಯದಲ್ಲಿ ಒದಗಿಸಿರುವ ಅನುದಾನ ಲಭ್ಯತೆ ಅವಶ್ಯಕತೆಗಳನ್ನು ಅನುಸರಿಸಿ 75 ಹೊಸ ವಿದ್ಯಾರ್ಥಿ ನಿಲಯಗಳನ್ನು ಹೊಸದಾಗಿ ಪ್ರಾರಂಭಿಸಲು ಈಗಾಗಲೇ ಮಂಜೂರಾತಿ ನೀಡಲಾಗಿದೆ ಆದುದರಿಂದ ಮುಂದಿನ ಆರ್ಥಿಕ ವರ್ಷದಲ್ಲಿ ಆಯವ್ಯಯದಲ್ಲಿ ಒದಗಿಸುವ ಅನುದಾನದ ಲಭ್ಯತೆ ರಾಜ್ಯದಲ್ಲಿನ ಇನ್ನಿತರೆ ಬೇಡಿಕೆ ಹಾಗೂ ಅವಶ್ಯಕತೆಯನ್ನು ಅನುಸರಿಸಿ ರೆಡ್ಡಿಗೊಲ್ಲವಾರಹಳ್ಳಿ, ದಿಬ್ಬೂರು, ಹೊಸಹುಡ್ಯ ಗ್ರಾಮಗಳಲ್ಲಿ ವಿದ್ಯಾರ್ಥಿ ನಿಲಯಗಳನ್ನು ಹೊಸದಾಗಿ ಮಂಜೂರು ಮಾಡಲು ಪರಿಶೀಲಿಸಲಾಗುವುದು

650 (284) ಶ್ರೀ ನೆ ಲ ನರೇಂದ್ರಬಾಬು ಶಾಸಕರು (ರಾಜಾಜಿನಗರ) – ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದಲ್ಲಿರುವ ಹೆಚ್ಐವಿ ಪೀಡಿತರ ಸಂಖ್ಯೆ ಎಷ್ಟು , .

ಆ) ಹೆಚ್ಐವಿ ನಿವಾರಣೆಗೋಸ್ಕರ ಸರ್ಕಾರವು ಆಯೋಜಿಸಿರುವ ಯೋಜನೆಗಳು ಯಾವುವು ,

ಇ) ಹೆಚ್ಐವಿ ನಿರ್ಮೂಲನೆಗೋಸ್ಕರ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಕಳೆದ ಮೂರು ವರ್ಷಗಳಿಂದ ಯಾವ ಸಂಘ ಸಂಸ್ಥೆಗಳಿಗೆ ಎಷ್ಟು ಹಣ ಬಿಡುಗಡೆಯಾಗಿದೆ ,